# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/ 174 /2022-23 ದಿನಾಂಕ : 19-9-2022

ದಿನಾಂಕ: 17-09-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ:174 ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

<u>ಉಪಸ್ಥಿತರು:</u>

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಸಿ.ಲಿಂಗರಾಜೇಗೌಡ | ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು ವಾರ್ಡ್ ಸಂಖ್ಯೆ:143 ಹೊಸ ಸಂಖ್ಯೆ: 174 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 6 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 8 | ಪಾರ್ವತಿಪುರ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 9 | ಶ್ರೀ. ಮಹದೇವ | ಎ.ಎಸ್.ಐ ಶಂಕರಪುರ | 9449870535 |
| 10 | ಶ್ರೀ ಪ್ರಹ್ಲಾದ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ | 9845444087 |
| 11 | ಶ್ರೀ.ಪಿ.ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ: 174 | 8660658637 |

ದಿನಾಂಕ 17-09-2022 ರಂದು ನಡೆದ ವಾರ್ಡ್ -174 ರ ಸಮಿತಿ ಸಭೆಯ ನಡಾವಳಿಗಳು:-

ಪು.ತಿ.ನೋ

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರುಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ಬಸವನಗುಡಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ.ರಾಜು ರವರು ಮಾತನಾಡಿ ಈ ಹಿಂದಿನ ಸಭೆಗಳಲ್ಲಿ ಚರ್ಚಿಸಲಾಗಿದ್ದ ವಿಷಯಗಳನ್ನು ಮೊತ್ತೊಮ್ಮೆ ಗಮನಕ್ಕೆ ತಂದು ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿದರು, ಅವುಗಳೆಂದರೆ:-

1. ಆರ್.ವಿ.ರಸ್ತೆಯಲ್ಲಿ ಟೀಚರ್ಸ್ ಕಾಲೇಜ್ ಬಳಿಯಲ್ಲಿ ಬಸ್ ಶೆಲ್ಟರ್ ನಿರ್ಮಾಣ ಮಾಡುವುದು.
2. ಶ್ರೀರಾಮ ಮಂದಿರ ರಸ್ತೆಯ ಕನ್ಸರ್‌ವೆನ್ಸಿಯಲ್ಲಿರುವ ಹಸುವಿನ ಶೆಡ್ ಅನ್ನು ತೆರವುಗೊಳಿಸುವುದು.
3. ಸರ್ವೇಯರ್ ರಸ್ತೆಯ ಕನ್ಸರ್‌ವೆನ್ಸಿಯಲ್ಲಿರುವ ನಾನ್ ವೆಜ್ ಹೋಟೆಲ್ ಮತ್ತು ಒತ್ತುವರಿಯನ್ನು ತೆರವುಗೊಳಿಸುವುದು.
4. ಸಜ್ಜನ್‌ರಾವ್ ವೃತ್ತದ ಬಳಿ ಇರುವ ಪಾರಿವಾಳಗಳ ಪಾರ್ಕನ್ನು ತೆಗೆದು ಡಾಂಬರೀಕರಣ ಮಾಡುವುದು.
5. ಕೆ.ಆರ್. ರಸ್ತೆಯಲ್ಲಿರುವ ನರ್ಸರಿಯನ್ನು ತೆರವುಗೊಳಿಸುವುದು.
6. ನ್ಯಾಷನಲ್ ಕಾಲೇಜು ಮೇಲು ಸೇತುವೆ ಕೆಳಗಡೆ ಕೆಲವರು ಆಟೋ, ಲಾರಿ, ಬಸ್‌ಗಳನ್ನು ನಿಲ್ಲಿಸುವುದರಿಂದ ಅಕ್ಕ ಪಕ್ಕದ ನಿವಾಸಿಗಳಿಗೆ ತೊಂದರೆಯಾಗುತ್ತಿದ್ದು, ತೆರವುಗೊಳಿಸಬೇಕೆಂದು ಕೋರಿದರು.

ಮಾನ್ಯ ನೋಡಲ್ ಅಧಿಕಾರಿಗಳು ಈ ಮೇಲಿನ ಎಲ್ಲಾ ವಿಷಯಗಳನ್ನು ಸಭೆಯಲ್ಲಿ ಸಮಗ್ರವಾಗಿ ಚರ್ಚಿಸಲಾಗಿ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳನ್ನು ಸಂಪರ್ಕಿ ಸಮನ್ವಯತೆಯಿಂದ ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ವಾರ್ಡ್ ಅಭಿಯಂತರರಿಗೆ ಸೂಚಿಸಿದರು, ನಂತರ ಶ್ರೀ. ರಾಜು ರವರು ಮಾತನ್ನು ಮುಂದುವರೆಸಿ ಸರ್ವೇಯರ್ ರಸ್ತೆಯಲ್ಲಿ ಸಿಂಬಯಾಸಿಸ್ ಸಂಸ್ಥೆಯವರು ಕಟ್ಟಡವನ್ನು ನಿರ್ಮಾಣ ಮಾಡುತ್ತಿದ್ದು, ಬಿಬಿಎಂಪಿ ನಿಯಮಗಳನ್ನು ಮೀರದಂತೆ ನೋಡಿಕೊಳ್ಳಬೇಕೆಂದು ಕೋರಿದರು. ಆಗ ವಾರ್ಡ್‌ನ ಅಭಿಯಂತರರು ಮಾತನಾಡುತ್ತಾ ಈಗಾಗಲೇ ಸದರಿ ಕಟ್ಟಡದ ಬಗ್ಗೆ ಸಹಾಯಕ ನಿರ್ದೇಶಕರು ನಗರ ಯೋಜನೆ (ದಕ್ಷಿಣ) ರವರು ಬಿಬಿಎಂಪಿ ಕಾಯ್ದೆ ಅಡಿಯಲ್ಲಿ ನೋಟೀಸ್‌ಗಳನ್ನು ಜಾರಿ ಮಾಡಿರುವುದಾಗಿ ಸಭೆಯ ಗಮನಕ್ಕೆ ತಂದರು.

ನಂತರ ವಾರ್ಡ್‌ನ ಅಭಿಯಂತರರು ಮಾತನಾಡುತ್ತಾ ದೊಡ್ಡಮಾವಳ್ಳಿ, ಸಿದ್ದೇಗೌಡ ರಸ್ತೆ, ನಂಜೇಗೌಡನಗರ ರಸ್ತೆ, ಎಲ್.ಬಿ.ಎಫ್. ರಸ್ತೆಯ ಕ್ರಾಸ್‌ಗಳು ಮತ್ತು ಚಿಕ್ಕಮಾವಳ್ಳಿ, ಉಪ್ಪಾರಹಳ್ಳಿಯ ಕೆಲವು ರಸ್ತೆಗಳಿಗೆ ಹೊಸದಾಗಿ ಕಾಂಕ್ರೀಟ್ ಹಾಕಿ ಅಭಿವೃದ್ಧಿ ಪಡಿಸಲಾಗಿದ್ದು, ಸದರಿ ರಸ್ತೆಗಳಲ್ಲಿರುವ ಒಳಚರಂಡಿ ಮ್ಯಾನ್ ಹೋಲ್‌ಗಳು ರಸ್ತೆಗಳಿಗಿಂತ ಮೇಲೆ ಮತ್ತು ಕೆಳಗಿದ್ದು ಸದರಿ ಮ್ಯಾನ್ ಹೋಲ್‌ಗಳನ್ನು ರಸ್ತೆಗಳಿಗೆ ಸಮನಾಗಿ ಬರುವಂತೆ ನಿರ್ಮಾಣ ಮಾಡಿಕೊಡಬೇಕೆಂದು ಸಭೆಯಲ್ಲಿ ಹಾಜರಿದ್ದ ಬೆಂಗಳೂರು ಜಲ ಮಂಡಳಿಯ ಸಹಾಯಕ ಅಭಿಯಂತರರಾದ ಶ್ರೀ.ಪ್ರಹ್ಲಾದ್ ರವರನ್ನು ಕೋರಿದರು, ಆಗ ಶ್ರೀ.ಪ್ರಹ್ಲಾದ್ ರವರು ಪ್ರತಿಕ್ರಿಯಿಸಿ ದುರಸ್ಥಿ ಪಡಿಸಿಕೊಡುವುದಾಗಿ ತಿಳಿಸಿದರು.

ಮು.ತಿ.ನೋ

ನಂತರ ಸಭೆಯಲ್ಲಿ ಹಾಜರಿದ್ದ ನಾಗರೀಕರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಒಳಚರಂಡಿ ಕೊಳವೆಗಳನ್ನು ಅಳವಡಿಸಲು ರಸ್ತೆ ಅಗೆದಿರುವುದು ಮತ್ತು ಗುಂಡಿಗಳಾಗಿದ್ದರೆ ಅವುಗಳನ್ನು ಸಹ ಡಾಂಬರು ಹಾಕಿ ಮುಚ್ಚುವಂತೆ ಕೋರಿದರು. ಈ ವಿಷಯವಾಗಿ ವಾರ್ಡ್‌ನ ಅಭಿಯಂತರರು ಮಾತನಾಡುತ್ತಾ ಗುಂಡಿಗಳನ್ನು ಮುಚ್ಚುವ ಸಂಬಂಧ ಕ್ರಮ ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ನಂತರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರವರ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ -174 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 174 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)